**All India Radio: Bangalore**
**Regional Bulletin In Kannada**
**23.12.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಹದಿನೇಳನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ರಾಯಭಾರಿಯಾಗಿ ಹಿರಿಯ ನಟ ಪ್ರಕಾಶ್‌ರಾಜ್ ನೇಮಕ
2. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಪಂದ್ಯಕ್ಕೆ ಅನುಮತಿ ನೀಡದ ಬೆಂಗಳೂರು ಪೊಲೀಸರು ; ದೇವನಹಳ್ಳಿಯಲ್ಲಿ ನಾಳೆಯಿಂದ ವಿಜಯ್ ಹಜಾರೆ ಟೂರ್ನಿ
3. ಅಕ್ರಮ ಆಸ್ತಿ ಪ್ರಕರಣ ; ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳಿಂದ ದಾಳಿ, ಪರಿಶೀಲನೆ
4. ಇಂದು ರಾಷ್ಟ್ರೀಯ ರೈತದಿನ ; ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸೇರಿದಂತೆ ಹಲವು ಗಣ್ಯರಿಂದ ಅನ್ನದಾತರ ಸ್ಮರಣೆ
5. ದ್ವೇಷ-ಭಾಷಣ ತಡೆಗಟ್ಟುವಿಕೆ ಮಸೂದೆ ವಿರೋಧಿಸಿ ಬಿಜೆಪಿ ಮೌನ ಪ್ರತಿಭಟನೆ

<><><><>

ಹದಿನೇಳನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಜನವರಿ ೨೯ರಿಂದ ಫೆಬ್ರವರಿ ೬ರವರೆಗೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ೧೭ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಸಂಘಟನಾ ಸಮಿತಿ ಜೊತೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಚಲನಚಿತ್ರೋತ್ಸವದ ರಾಯಭಾರಿಯಾಗಿ ಹಿರಿಯ ಚಲನಚಿತ್ರ ನಟ, ನಿರ್ದೇಶಕ, ನಿರ್ಮಾಪಕ ಪ್ರಕಾಶ್ ರಾಜ್ ಅವರನ್ನು ನೇಮಿಸಲಾಗಿದೆ. ಈ ಬಾರಿಯ ಚಲನಚಿತ್ರೋತ್ಸವದಲ್ಲಿ ಮಹಿಳಾ ಸಬಲೀಕರಣ ಕುರಿತಾದ ಥೀಮ್ ಇರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಮೂರು ಸ್ಪರ್ಧಾ ವಿಭಾಗಗಳಿಗೆ ಇದುವರೆಗೆ ೧೧೦ಕ್ಕೂ ಹೆಚ್ಚು ಚಲನಚಿತ್ರಗಳು ಸಲ್ಲಿಕೆಯಾಗಿವೆ. ಕನ್ನಡ ಮತ್ತು ಭಾರತೀಯ ಚಿತ್ರಗಳು ಸೇರಿದಂತೆ ಒಟ್ಟಾರೆ ೬೦ಕ್ಕೂ ಹೆಚ್ಚು ದೇಶಗಳ ೨೦೦ ಚಲನಚಿತ್ರಗಳ ೪೦೦ಕ್ಕೂ ಹೆಚ್ಚು ಪ್ರದರ್ಶನಗಳು ಇರಲಿವೆ. ಈ ಬಾರಿ ಆಸ್ಕರ್ ಪ್ರಶಸ್ತಿಗೆ ಅಂತಿಮ ಪಟ್ಟಿಯಲ್ಲಿದ್ದ ವಿವಿಧ ದೇಶಗಳ ಅತ್ಯುತ್ತಮ ಚಲನಚಿತ್ರಗಳು ಪ್ರದರ್ಶನಗೊಳ್ಳಲಿವೆ. ಸಮಾರೋಪ ಸಮಾರಂಭದಲ್ಲಿ ಅತ್ಯುತ್ತಮ ಚಲನಚಿತ್ರಗಳಿಗೆ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><><><>

ನಾಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಬೇಕಿದ್ದ ದೆಹಲಿ ಮತ್ತು ಆಂಧ್ರಪ್ರದೇಶ ನಡುವಿನ ವಿಜಯ್ ಹಜಾರೆ ಟೂರ್ನಿಯ ಪಂದ್ಯಕ್ಕೆ ಅನುಮತಿ ನೀಡಲು ಪೊಲೀಸರು ನಿರಾಕರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪಂದ್ಯವನ್ನು ದೇವನಹಳ್ಳಿಯ ಕೆಂಪೇಗೌಡ ವಿಮಾನ ನಿಲ್ದಾಣದ ಸಮೀಪವಿರುವ ಸೆಂಟರ್ ಆಫ್ ಎಕ್ಸೆಲೆನ್ಸ್ ಮೈದಾನದಲ್ಲಿ ಆಯೋಜಿಸಲಾಗಿದೆ. ಆದರೆ ಈ ಪಂದ್ಯಗಳ ವೀಕ್ಷಣೆಗೆ ಪ್ರೇಕ್ಷಕರಿಗೆ ಅನುಮತಿ ಇರುವುದಿಲ್ಲ. ಪಂದ್ಯ ನಡೆಸುವ ಕುರಿತಂತೆ ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳು ಈಗಾಗಲೇ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಪರಿಶೀಲನೆಯ ಬಳಿಕ ಪೊಲೀಸರು, ಈ ನಿರ್ಧಾರ ಕೈಗೊಂಡಿದ್ದಾರೆ. ನಾಳೆ ನಡೆಯುವ ದೆಹಲಿ ಮತ್ತು ಆಂಧ್ರಪ್ರದೇಶ ನಡುವಿನ ಪಂದ್ಯದಲ್ಲಿ ವಿರಾಟ್ ಕೊಹ್ಲಿ, ದೆಹಲಿ ತಂಡದ ಪರವಾಗಿ ಕಣಕ್ಕಿಳಿಯಲಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಕ್ರೀಡಾಂಗಣದ ಬಳಿ ಬಿಗಿ ಭದ್ರತೆ ವಹಿಸಲು ಪೊಲೀಸ್ ಇಲಾಖೆ ಸಜ್ಜಾಗಿದೆ.

<><><><>

ಭ್ರಷ್ಟಾಚಾರ ಮತ್ತು ಆದಾಯಕ್ಕೆ ಮೀರಿದ ಆಸ್ತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಅಧಿಕಾರಿಗಳು ಇಂದು ರಾಜ್ಯದ ಹಲವಾರು ಸರ್ಕಾರಿ ಅಧಿಕಾರಿಗಳ ಮನೆಗಳು ಮತ್ತು ಕಚೇರಿಗಳ ಮೇಲೆ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ. ಬಾಗಲಕೋಟೆ, ವಿಜಯಪುರ, ಕಾರವಾರ ಮತ್ತು ರಾಯಚೂರು ಜಿಲ್ಲೆಗಳಲ್ಲಿ ದಾಳಿ ನಡೆದಿದ್ದು, ಅಧಿಕಾರಿಗಳು ಶೋಧ ನಡೆಸುತ್ತಿದ್ದಾರೆ. ರಾಯಚೂರಿನ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್

ಇಲಾಖೆಯ ಗ್ರಾಮೀಣ ಕುಡಿಯುವ ನೀರು, ಸರಬರಾಜು ವಿಭಾಗದ ಸಿಂಧನೂರು ಎಇಇ, ಬಿ.ವಿಜಯಲಕ್ಷ್ಮಿಗೆ ಸೇರಿದ ಹಲವು ಕಡೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಒಟ್ಟು ೪೯ ಕಡೆ ಆಸ್ತಿ ಮಾಡಿರುವ ಈ ಅಧಿಕಾರಿಗೆ ಸೇರಿದ ನಿವೇಶನ ಮನೆ, ಚಿನ್ನಾಭರಣವನ್ನು ಲೋಕಾಯುಕ್ತ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

<><><><>

ಇಂದು ರಾಷ್ಟ್ರೀಯ ರೈತ ದಿನ. ಪ್ರತಿವರ್ಷ ಡಿಸೆಂಬರ್ ೨೩ ರಂದು ರಾಷ್ಟ್ರೀಯ ರೈತ ದಿನವನ್ನಾಗಿ ಆಚರಿಸಲಾಗುತ್ತದೆ. ಭಾರತದ ೫ನೇ ಪ್ರಧಾನ ಮಂತ್ರಿ ಹಾಗೂ ರೈತ ನಾಯಕ, ಚೌಧರಿ ಚರಣ್ ಸಿಂಗ್ ಅವರ ಜನ್ಮದಿನವನ್ನು ರೈತ ದಿನವನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಚರಣ್ ಸಿಂಗ್ ಅವರು ರೈತರ ಕಲ್ಯಾಣಕ್ಕಾಗಿ ಅನೇಕ ಸುಧಾರಣೆಗಳನ್ನು ತಂದಿದ್ದರಿಂದ, ೨೦೦೧ರಿಂದ ಅವರ ಜನ್ಮದಿನವನ್ನು 'ಕಿಸಾನ್ ದಿವಸ್' ಎಂದು ಆಚರಿಸಲಾಗುತ್ತಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಚೌಧರಿ ಚರಣ್ ಸಿಂಗ್ ಅವರ ಜನ್ಮದಿನದಂದು ಅವರಿಗೆ ಗೌರವ ನಮನ ಸಲ್ಲಿಸಿದರು. ಕೇಂದ್ರ ಗ್ರಾಹಕ ವ್ಯವಹಾರ ಹಾಗೂ ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ದೇಶದ ರೈತರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದ್ದಾರೆ. ರೈತ ದಿನದ ಅಂಗವಾಗಿ ಕೇಂದ್ರ ಸಚಿವ ವಿ. ಸೋಮಣ್ಣ ಸೇರಿದಂತೆ ಇತರೆ ಗಣ್ಯರು ಶುಭಾಶಯ ಕೋರಿದ್ದಾರೆ. "ರೈತನೇ ದೇಶದ ಬೆನ್ನೆಲುಬು" ಎಂಬ ಮಾತಿನಂತೆ, ನಮಗೆ ಅನ್ನ ನೀಡುವ ರೈತರ ಶ್ರಮವನ್ನು ಗುರುತಿಸಿ ಗೌರವಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ರೈತರ ಸಮಸ್ಯೆಗಳಿಗೆ ಸ್ಪಂದಿಸುವುದು ಮತ್ತು ಅವರ ಜೀವನಮಟ್ಟವನ್ನು ಸುಧಾರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ.

<><><><>

ದೇಶದ ಆರ್ಥಿಕತೆಯ ಬೆನ್ನೆಲುಬಾಗಿರುವ ರೈತರ ಶ್ರಮ ಸದಾ ಸ್ಮರಣೀಯ ಎಂದು ದಾವಣಗೆರೆ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಶ್ರೀಧರ ಮೂರ್ತಿ ತಿಳಿಸಿದ್ದಾರೆ. ದಾವಣಗೆರೆ ತಾಲ್ಲೂಕಿನ ಕಾಡಜ್ಜಿಯ ಕೃಷಿ ತರಬೇತಿ ಕೇಂದ್ರದಲ್ಲಿಂದು ಹಮ್ಮಿಕೊಂಡಿದ್ದ ರಾಷ್ಟ್ರೀಯ ರೈತರ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಆಧುನಿಕ ಕೃಷಿ ಪದ್ಧತಿ ದೇಶದ ಕೃಷಿಯನ್ನು ಮತ್ತೊಂದು ದಿಕ್ಕಿನತ್ತ ಕೊಂಡೊಯ್ದಿದ್ದು, ಭವಿಷ್ಯದಲ್ಲಿ ಯಾಂತ್ರಿಕ ಕೃಷಿ ದೇಶದ ಚಿತ್ರಣವನ್ನೇ ಬದಲಿಸಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಮೆಳೆಕೋಟೆಯಲ್ಲಿ ಸ್ಫೂರ್ತಿ ಕಲಾ ಟ್ರಸ್ಟ್ ಮತ್ತು ವಿವಿಧ ರೈತ ಸಂಘಟನೆಗಳ ಸಹಯೋಗದಲ್ಲಿ ರಾಷ್ಟ್ರೀಯ ರೈತ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶಕ್ಕೆ ರೈತರ ಕೊಡುಗೆ ಅಪಾರ ವಾಗಿದ್ದು, ರೈತರಿಗೆ ಸರ್ಕಾರದ ಯೋಜನೆಗಳು ಹಾಗೂ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸುವಲ್ಲಿ ಸ್ಥಳೀಯ ಆಡಳಿತಗಳು ಗಮನ ಹರಿಸಬೇಕಿದೆ ಎಂದು ತಿಳಿಸಿದ್ದಾರೆ.

<><><><>

ವಿವಾದಾತ್ಮಕ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ತಡೆಗಟ್ಟುವಿಕೆ ಮಸೂದೆಯನ್ನು ವಿರೋಧಿಸಿ ಬೆಂಗಳೂರಿನ ಜಿಲ್ಲಾಧಿಕಾರಿ ಕಚೇರಿ ಮುಂದೆ ಬಿಜೆಪಿ ಮೌನ ಪ್ರತಿಭಟನೆ ನಡೆಸಿದೆ. ಪ್ರಸ್ತಾವಿತ ಶಾಸನವನ್ನು ವಿರೋಧಿಸಿ ಪಕ್ಷದ ನಿಯೋಗವು ಜಿಲ್ಲಾಧಿಕಾರಿ ಮೂಲಕ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದೆ. ಈ ಮಸೂದೆಯು ಸಂವಿಧಾನ ಬಾಹಿರವಾಗಿದ್ದು, ನಾಗರಿಕರ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ಬಿಜೆಪಿ ಅಭಿಪ್ರಾಯ ವ್ಯಕ್ತಪಡಿಸಿದೆ.

<><><><>

ಬೆಂಗಳೂರಿನ ಬಾಗಲೂರಿನಲ್ಲಿ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ನೂತನ ಸ್ನಾತಕೋತ್ತರ ಕೇಂದ್ರವನ್ನು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಇಂದು ಉದ್ಘಾಟಿಸಿದರು. ಸರ್ಕಾರಿ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಏರ್ಪಡಿಸಲಾಗಿದ್ದ ಸಮಾರಂಭದಲ್ಲಿ ಅವರು ಶಿಲಾಫಲಕವನ್ನು ಅನಾವರಣಗೊಳಿಸಿ ಶುಭ ಹಾರೈಸಿದರು. ಉನ್ನತ ಶಿಕ್ಷಣದ ಸೌಲಭ್ಯ ವಿಸ್ತರಣೆಯ ಜೊತೆಗೆ ಗುಣಮಟ್ಟದ ಬಗ್ಗೆಯೂ ಅಗತ್ಯ ಗಮನ ಹರಿಸಬೇಕೆಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬ್ಯಾಟರಾಯನಪುರ ಕ್ಷೇತ್ರದ ಶಾಸಕ, ಕಂದಾಯ ಸಚಿವ ಕೃಷ್ಣ ಭೈರೇಗೌಡ, ನೂತನ ಸ್ನಾತಕೋತ್ತರ ಕೇಂದ್ರಕ್ಕೆ ಅಗತ್ಯವಿರುವ ಭೂಮಿ ಮತ್ತು ಮೂಲಸೌಕರ್ಯ ಒದಗಿಸುವ ಭರವಸೆ ನೀಡಿದ್ದಾರೆ. ಅಧಿಕ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಸ್ನಾತಕೋತ್ತರ ಕೇಂದ್ರದಲ್ಲಿ ಪ್ರವೇಶ ಪಡೆದು ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಕರೆ ನೀಡಿದ್ದಾರೆ.

ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ರಮೇಶ್. ಬಿ. ಮಾತನಾಡಿ, ಬಡ ಮತ್ತು ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ಕಡಿಮೆ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಉನ್ನತ ಶಿಕ್ಷಣ ಒದಗಿಸುವ ನಿಟ್ಟಿನಲ್ಲಿ ಈ ಸ್ನಾತಕೋತ್ತರ ಕೇಂದ್ರ ಮಹತ್ವದ ಹೆಜ್ಜೆಯಾಗಿದೆ ಎಂದು ತಿಳಿಸಿದ್ದಾರೆ.

<><><><>

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯು ಪ್ರಸ್ತುತ ಜಿ ರಾಮ್‌ಜಿ ಯೋಜನೆಯಾಗಿ ಮರು ರೂಪಗೊಂಡಿದೆ. ಈ ಕಾಯ್ದೆಯು ೨೦೦೭ರಲ್ಲಿ ಡಾ.ಮನಮೋಹನ್‌ಸಿಂಗ್ ನೇತೃತ್ವದ ಯುಪಿಎ ಸರ್ಕಾರದ ಅವಧಿಯಲ್ಲಿ ಗ್ರಾಮೀಣ ಭಾಗದ ಕೂಲಿಕಾರರಿಗೆ ಉದ್ಯೋಗ ನೀಡುವ ಉದ್ದೇಶದಿಂದ ಜಾರಿಯಾಗಿದೆ. ಈ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮತ್ತಷ್ಟು ಶಕ್ತಿ ತುಂಬಬೇಕೆಂದು ಮಂಡ್ಯ ಜಿಲ್ಲೆಯ ಕಾರ್ಮಿಕ ಮುಖಂಡ ಎನ್.ಎಲ್.ಭರತ್‌ರಾಜ್ ಮನವಿ ಮಾಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>